ಓ ಎಸ್ ನಂಃ 63/2017

ಡಿ. ಡಬ್ಲ್ಯೂ ಃ 1

ದಿಃ 14.06.2023 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.

ಮುಖ್ಯ ವಿಚಾರಣೆಃ 3 ನೇ ಪ್ರತಿವಾದಿ ಪರ ಶ್ರೀ ಹೆಚ್.ಎನ್.ಎಸ್ ವಕೀಲರಿಂದ

ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರಿಕೆ ಸಲ್ಲಿಸಿರುತ್ತೇನೆ. ಅದರಲ್ಲಿರುವ ಎಲ್ಲಾ ವಿಚಾರಗಳು ಸತ್ಯವಾಗಿರುತ್ತದೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ಸದರಿ ಪ್ರಮಾಣ ಪತ್ರಿಕೆಯನ್ನು ನನ್ನ ಮುಖ್ಯ ವಿಚಾರಣೆ ಎಂದು ತೆಗೆದುಕೊಳ್ಳಬೇಕು ಎಂದು ಕೋರುತ್ತೇನೆ.

ನಮ್ಮ ಕುಟುಂಬದ ವಂಶವೃಕ್ಷವಿರುವ ಪ್ರಮಾಣಪತ್ರವನ್ನು ಕೊಟ್ಟಿದ್ದು ಅದನ್ನು ನಿ ಡಿ 1 ಎಂದು, ದಿನಾಂಕ ಃ 21.08.1998 ರ ಕ್ರಯಪತ್ರದ ದೃಢೀಕೃತ ಪ್ರತಿಯನ್ನು ಕೊಟ್ಟಿದ್ದು ಅದನ್ನು ನಿ ಡಿ 2 ಎಂದು, ಸಾಗುವಳಿ ಚೀಟಿಯ ದೃಢೀಕೃತ ಪ್ರತಿಯನ್ನು ಕೊಟ್ಟಿದ್ದು ಅದನ್ನು ನಿ ಡಿ 3 ಎಂದು, ರಂಗೇಗೌಡ ಇವರ ಮರಣ ಪ್ರಮಾಣಪತ್ರವನ್ನು ಕೊಟ್ಟಿದ್ದು ಅದನ್ನು ನಿ ಡಿ 4 ಎಂದು, ಅವರ ತಿಥಿ ಕಾರ್ಡ್ ನ್ನು ಕೊಟ್ಟಿದ್ದು ಅದನ್ನು ನಿ ಡಿ 5 ಎಂದು, ಕೃಷ್ಣಮ್ಮ ಇವರ ವ್ಯಾಸಂಗ ಪ್ರಮಾಣ ಪತ್ರವನ್ನು ಕೊಟ್ಟಿದ್ದು ಅದನ್ನು ನಿ ಡಿ 6 ಎಂದು, ಶೋಭಾ ಇವರ ಶಾಲಾ ದಾಖಲಾತಿಯನ್ನು ಕೊಟ್ಟಿದ್ದು ಅದನ್ನು ನಿ ಡಿ 7 ಎಂದು, ನನ್ನ ಶಾಲಾ ದಾಖಲಾತಿಯನ್ನು ಕೊಟ್ಟಿದ್ದು ಅದನ್ನು ನಿ ಡಿ 8 ಎಂದು, ಆರ್ ಚಂದ್ರಶೇಖರ್ ಮೂರ್ತಿ ಇವರ ಶಾಲಾ ದಾಖಲಾತಿಯನ್ನು ಕೊಟ್ಟಿದ್ದು ಅದನ್ನು ನಿ ಡಿ 9 ಎಂದು, ಕುಟುಂಬದ ಪಡಿತರ ಚೀಟಿಯ ದೃಢೀಕೃತ ಪ್ರತಿಯನ್ನು ಕೊಟ್ಟಿದ್ದು ಅದನ್ನು ನಿ ಡಿ 10 ಎಂದು, ಆಧಾರ್ ಕಾರ್ಡ್ ಗಳ ದೃಢೀಕೃತ ಪ್ರತಿಗಳನ್ನು ಕೊಟ್ಟಿದ್ದು ಅವುಗಳನ್ನು ನಿ ಡಿ 11 ರಿಂದ ನಿ ಡಿ 14 ಎಂದು, ಕಂದಾಯ ಪಾವತಿಸಿದ ರಶೀದಿಗಳ ದೃಢೀಕೃತ ಪ್ರತಿಗಳನ್ನು ಕೊಟ್ಟಿದ್ದು ಅವುಗಳನ್ನು ನಿ ಡಿ 15 ರಿಂದ ನಿ ಡಿ 35 ಎಂದು , ಪಟ್ಟಾ ಬುಕ್ ನ ದೃಢೀಕೃತ ಪ್ರತಿಯನ್ನು ಕೊಟ್ಟಿದ್ದು ಅದನ್ನು ನಿ ಡಿ 36 ಎಂದು, ವಿಲ್ ನ ದೃಢೀಕೃತ ಪ್ರತಿಯನ್ನು ಕೊಟ್ಟಿದ್ದು ಅದನ್ನು ನಿಶಾನೆಗೊಳಿಸಲು ವಾದಿ ಪರ ವಕೀಲರು ಆಕ್ಷೇಪಣೆ ವ್ಯಕ್ತಪಡಿಸಿದ್ದು ಅದನ್ನು ಆಕ್ಷೇಪಣೆಗೊಳಪಟ್ಟು ನಿ ಡಿ 37 ಎಂದು , ಆರ್ ಟಿ ಸಿ ಗಳನ್ನು ಕೊಟ್ಟಿದ್ದು ಅವುಗಳನ್ನು ನಿ ಡಿ 38 ರಿಂದ ನಿ ಡಿ 41 ಎಂದು,

ಎಂ ಆರ್ 06/2017-18 ರ ದೃಢೀಕೃತ ಪ್ರತಿಯನ್ನು ಕೊಟ್ಟಿದ್ದು ಅದನ್ನು ನಿ ಡಿ 42 ಎಂದು ಗುರುತಿಸಲಾಯಿತು. ವಾದಿಯ ದಾವೆಯನ್ನು ವಜಾ ಮಾಡಬೇಕೆಂದು ಕೋರಿಕೊಳ್ಳುತ್ತೇನೆ.

ಪಾಟೀ ಸವಾಲಿಗಾಗಿ ಕಾಲಾವಕಾಶ ಕೋರಿದ್ದು, ಕೋರಿಕೆಯ ಮೇರೆಗೆ ಮುಂದೂಡಲಾಯಿತು.

(ಉಕ್ತ ಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಓ

ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರು,

ಮಾಗಡಿ.